## ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\8067\2015\ಸನಿಕಾಸ-1

ಬಹುಮಹಡಿಗಳ ಕಟ್ಟಡ,
ಡಾ||ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:18/05/2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ದೂರುದಾರರಾದ ಶ್ರೀ.ಡಿ.ಪಾರ್ಥಸಾರಥಿ ಬಿನ್ ದೊಡ್ಡರಂಗಪ್ಪ, ದೊಡ್ಡನಾರವಂಗಲ ಅಂಚೆ, ಬೆಳ್ಳಾವಿ ಹೋಬಳಿ, ತುಮಕೂರು ತಾಲ್ಲೂಕ್ ಮತ್ತು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ತುಮಕೂರು ಜಿಲ್ಲೆ ಮತ್ತು ತಾಲ್ಲೂಕ್ ಬೆಳ್ಳಾವಿ ಹೋಬಳಿ ದೊಡ್ಡನಾರವಂಗಲ ಅಂಚೆಯ ನಿವಾಸಿಯಾದ ಶ್ರೀ.ಡಿ.ಪಾರ್ಥಸಾರಥಿ ಬಿನ್ ದೊಡ್ಡರಂಗಪ್ಪ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕ್ 1) ದೊಡ್ಡ ನಾರವಂಗಲ ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಪ್ರಭಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ.ಹನುಮಂತರಾಯಪ್ಪ ಮತ್ತು 2) ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ.ರಾಮಕುಮಾರ್ (ಇನ್ನು ಮುಂದೆ "1 ಮತ್ತು 2ನೇ ಎದುರುದಾರ" ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–** ತುಮಕೂರು ಜಿಲ್ಲೆ ಮತ್ತು ತಾಲ್ಲೂಕ್ ದೊಡ್ಡನಾರವಂಗಲ ಗ್ರಾಮದ ನಿವೇಶನ ಸಂ:69 ಖಾತಾ ನಂ.190ರ ಮಾಲೀಕರಾದ ಶ್ರೀ.ನರಸೇಗೌಡ ಬಿನ್ ಚಿಕ್ಕಉರಗಯ್ಯ ಎಂಬುವವರಿಗೆ ಮನೆ ಕಟ್ಟಲು ಎದುರುದಾರರು ಅನುಮತಿ ನೀಡಿದ್ದು, ಅದರಂತೆ ಸದರಿ ಕಟ್ಟಡದ ಮಾಲೀಕರು ಅನಧಿಕೃತವಾಗಿ ಮನೆ ನಿರ್ಮಿಸುತ್ತಿದ್ದು, ಸದರಿ ನಿವೇಶನದ ಮಾಲೀಕರಿಗೆ ಸಂಬಂಧಪಟ್ಟಂತೆ ಒಂದು ಹಳೆಯ ಮನೆ ಶ್ರೀಮತಿ.ಕಮಲಮ್ಮ ಎಂಬುವವರ ಮನೆಗೆ ಹೊಂದಿಕೊಂಡಂತಿದ್ದು, ಪ್ರಸ್ತುತವಾಗಿ ಸದರಿ ಶ್ರೀ.ನರಸೇಗೌಡರು ಸದರಿ ಕಟ್ಟಡದ ಪಕ್ಕದ ಮನೆಯ ಮಾಲೀಕರಾದ ಶ್ರೀಮತಿ.ಕಮಲಮ್ಮರವರ ಮನೆಯ ಕಡೆಗೆ 6 ಅಡಿ ಜಾಗ ಬಿಟ್ಟು ನಿರ್ಮಿಸುತ್ತಿದ್ದು ಮತ್ತು ಸದರಿ ಸ್ವತ್ತಿನ ಪಶ್ಚಿಮ ದಿಕ್ಕಿನಲ್ಲಿದ್ದ 6 ಅಡಿ ಚರಂಡಿಗೆ ಬಿಟ್ಟಿದ್ದ ಆಸ್ತಿಯನ್ನು ಒತ್ತುವರಿ

ಮಾಡಿ ನಿರ್ಮಿಸುತ್ತಿದ್ದಾರೆ ಮತ್ತು ಸದರಿ ಕಟ್ಟಡಕ್ಕೆ ಸಂಬಂಧಪಟ್ಟಂತೆ ದಕ್ಷಿಣ ದಿಕ್ಕಿನಲ್ಲಿ ಸೆಟ್ ಬ್ಯಾಕ್ ಬಿಟ್ಟಿರುವುದಿಲ್ಲ. ಅಲ್ಲದೇ, ಆ ಸ್ಥಳದಲ್ಲಿ ನೀರಿನ ತೊಟ್ಟಿಯನ್ನು ನಿರ್ಮಿಸುತ್ತಿದ್ದು, ಸದರಿ ಸ್ವತ್ತು ಸರ್ಕಾರದ ರಸ್ತೆಯಾಗಿರುತ್ತದೆ. ಈ ರೀತಿ, ಸರ್ಕಾರಿ ರಸ್ತೆಯನ್ನು ಒತ್ತುವರಿ ಮಾಡಿ, ಕಟ್ಟಡ ನಿರ್ಮಿಸಲು ಎದುರುದಾರರು ಅನುಮತಿ ನೀಡಿರುವುದಾಗಿ ಹೇಳಿದ್ದಾರೆ.

3. ದೂರಿನ ಬಗ್ಗೆ ತನಿಖೆ ಕೈಗೊಂಡು ವರದಿ ಸಲ್ಲಿಸುವಂತೆ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು ರವರಿಗೆ ಕೇಳಲಾಗಿ, ಸದರಿಯವರು ತನಿಖೆ ನಡೆಸಿ ವರದಿ ಸಲ್ಲಿಸಲು 2ನೇ ಎದುರುದಾರರಿಗೆ ಆದೇಶಿಸಿದ್ದು, ಸದರಿಯವರು ಸ್ಥಳ ತನಿಖೆ ಮಾಡಿ ವರದಿ ಸಲ್ಲಿಸಿದ್ದು, ಅದರಲ್ಲಿ ಸದರಿ ಒತ್ತುವರಿಯನ್ನು ತೆರವುಗೊಳಿಸಿರುವ ಬಗ್ಗೆ ಫೋಟೋ ಸಮೇತ ವರದಿ ಸಲ್ಲಿಸಿದ್ದು, ಆದರೆ ಛಾಯಾಚಿತ್ರಗಳಲ್ಲಿ ಸ್ಪಷ್ಟತೆ ಇಲ್ಲದಿರುವುದರಿಂದ, ಪುನಃ 2ನೇ ಎದುರುದಾರರಿಗೆ ಸ್ಥಳ ಪರಿಶೀಲನೆ ಮಾಡಿ ವರದಿ ನೀಡುವಂತೆ ಆದೇಶಿಸಿದ್ದು, ಸದರಿ ಒತ್ತುವರಿ ಮಾಡಿರುವ ರಸ್ತೆ ಜಾಗವನ್ನು ಶೀಘ್ರವಾಗಿ ತೆರವುಗೊಳಿಸಲು ನಿಯಮಾನುಸಾರ ಪರಾಮರ್ಶಿಸಿ ಸೂಕ್ತ ಕ್ರಮವಹಿಸಿ ನಿಯಮಬಾಹಿರವಾಗಿ ವರ್ತಿಸಿ ಕರ್ತವ್ಯ ಲೋಪ ಎಸಗಿರುವ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಸಂಬಂಧ ಆರೋಪ ಪಟ್ಟಿಯನ್ನು ಅಗತ್ಯ ದಾಖಲೆಗಳೊಂದಿಗೆ ವರದಿ ಸಲ್ಲಿಸುವಂತೆ 2ನೇ ಎದುರುದಾರರಿಗೆ ಹಲವಾರು ಬಾರಿ ತಿಳಿಸಿದರೂ ಸಹ ಸ್ಪಷ್ಟವಾದ ವರದಿಯನ್ನು ಸಲ್ಲಿಸಿಲ್ಲವೆಂದು ಹೇಳಿದ್ದಾರೆ.

4. ದೂರು ಮತ್ತು ವರದಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿಲ್ಲ.

5. ವರದಿಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ವರದಿಯ ಅಂಶಗಳನ್ನು ಅಲ್ಲಗಳೆದು, ದೂರಿನ ಅಂಶಗಳನ್ನೇ ಪುನರುಚ್ಚರಿಸಿದ್ದಾರೆ.

6. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಸದರಿ ನಿವೇಶನಕ್ಕೆ ಸಂಬಂಧಪಟ್ಟಂತೆ 1ನೇ ಎದುರುದಾರರು ಶ್ರೀ.ನರಸೇಗೌಡ ಬಿನ್ ಚಿಕ್ಕಉಗ್ರಯ್ಯ ರವರಿಗೆ ಪೂರ್ವ–ಪಶ್ಚಿಮ 27 ಅಡಿ, ಉತ್ತರ–ದಕ್ಷಿಣ 55 ಅಡಿ ಮನೆ ಕಟ್ಟಲು ಪರವಾನಗಿ ನೀಡಿದ್ದು, ಆ ನಂತರ ಪೂರ್ವ–ಪಶ್ಚಿಮ 25 ಅಡಿ, ಉತ್ತರ–ದಕ್ಷಿಣ 45 ಅಡಿಗಳಿಗೆ ಮಾರ್ಪಡಿಸಿದ್ದಾರೆ. ಸದರಿ ನಿವೇಶನಕ್ಕೆ ಸಂಬಂಧಪಟ್ಟಂತೆ ದೂರುದಾರರು 2ನೇ ಎದುರುದಾರರ ನ್ಯಾಯಾಲಯದಲ್ಲಿ ಪ್ರಕರಣ ಸಂ:1/2015–16ರಂತೆ ಸಲ್ಲಿಸಿದ್ದು, 2ನೇ ಎದುರುದಾರರು ದಿ:08/04/15ರಂದು ಸದರಿ ಮನೆಯ ಪೂರ್ವ ಮತ್ತು ಪಶ್ಚಿಮ ದಿಕ್ಕಿನ ಸಾರ್ವಜನಿಕರ ಮನೆಗಳಿಗೆ ರಸ್ತೆ ಅವಶ್ಯಕತೆಯಿದ್ದು, ಶ್ರೀ.ನರಸೇಗೌಡ ಬಿನ್ ಚಿಕ್ಕಉಗ್ರಯ್ಯ ರವರ ಅಳತೆ ಪೂರ್ವ–ಪಶ್ಚಿಮ 25 ಅಡಿ, ಉತ್ತರ–ದಕ್ಷಿಣ 45 ಅಡಿ ಅಳತೆಗೆ ಮಿತಿಗೊಳಿಸಿ ಕಾಂಪೌಂಡ್ ನಿರ್ಮಿಸಿಕೊಳ್ಳಲು ಅವಕಾಶ ಕಲ್ಪಿಸಿದ್ದು, ಹೆಚ್ಚುವರಿ ನಿರ್ಮಿಸಿರುವ ಭಾಗಗಳನ್ನು ತೆರವುಗೊಳಿಸಿ ಮತ್ತು ಉತ್ತರದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ 5 ಅಡಿ ದಾರಿ ಬಿಡುವಂತೆ ಕ್ರಮವಹಿಸಲು ಗ್ರಾಮ ಪಂಚಾಯತ್‌ಗೆ ಆದೇಶಿಸಿದೆಯೆಂದು ಆದೇಶ ಹೊರಡಿಸಿದ್ದಾರೆ. ಈ ಆದೇಶವನ್ನು ಪರಿಶೀಲಿಸಲಾಗಿ, ಶ್ರೀ.ನರಸೇಗೌಡ ಬಿನ್ ಚಿಕ್ಕಉಗ್ರಯ್ಯ ರವರು ಸರ್ಕಾರಿ ರಸ್ತೆಯನ್ನು ಒತ್ತುವರಿ ಮಾಡಿ, ಕಟ್ಟಡ ನಿರ್ಮಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಈ ಸಂಬಂಧವಾಗಿ ದೂರುದಾರರು ಹಲವಾರು ಬಾರಿ ಎದುರುದಾರರಿಗೆ ಮನವಿ ಸಲ್ಲಿಸಿದ್ದರೂ ಸಹ ಈ ಬಗ್ಗೆ ಸ್ಥಳ ಪರಿಶೀಲನೆ ಮಾಡಿ, ಒತ್ತುವರಿಯಾದ ಸಾರ್ವಜನಿಕ ರಸ್ತೆಯಲ್ಲಿ ನಿರ್ಮಿಸಲಾದ ಕಟ್ಟಡದ ಅನಧಿಕೃತ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಅಲ್ಲದೇ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ರವರು ಸ್ಥಳ ಪರಿಶೀಲನೆ ಮಾಡಿ ವರದಿ ಸಲ್ಲಿಸುವಂತೆ ಮತ್ತು 1ನೇ ಎದುರುದಾರರ ವಿರುದ್ಧ ಕ್ರಮ ಜರುಗಿಸುವಂತೆ 2ನೇ ಎದುರುದಾರರಿಗೆ ಲಿಖಿತ ಆದೇಶ ಹೊರಡಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ. ಸದರಿ ಕಟ್ಟಡದ ಮಾಲೀಕರು ಸರ್ಕಾರಿ ರಸ್ತೆಯನ್ನು ಒತ್ತುವರಿ ಮಾಡಿ, ಕಟ್ಟಡ ನಿರ್ಮಿಸುತ್ತಿರುವ ವಿಚಾರ ಎದುರುದಾರರಿಗೆ ಗೊತ್ತಿದ್ದರೂ ಸಹ ಯಾವುದೆ ಕ್ರಮ ಕೈಗೊಳ್ಳದೇ, ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

7. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರುಗಳ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

Sd/-

8. ಆದ್ದರಿಂದ, ಸದರಿ ಒತ್ತುವರಿಯಾಗಿರುವ ಸರ್ಕಾರಿ ರಸ್ತೆಯ ಒತ್ತುವರಿಯನ್ನು ತೆರವುಗೊಳಿಸುವಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 18/5/17

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.